ಕರ್ನಾಟಕ ಸರ್ಕಾರ
(ನೋಂದಣಿ ಮತ್ತು ಮುದ್ರಾಂಕ ಇಲಾಖೆ)

**ಸಂಖ್ಯೆ:Comp /121/2020-21**

ನೋಂದಣಿ ಮಹಾ ಪರಿವೀಕ್ಷಕರು ಮತ್ತು
ಮುದ್ರಾಂಕಗಳ ಆಯುಕ್ತರವರಕಛೇರಿ,
8ನೇ ಮಹಡಿ, ಕಂದಾಯಭವನ,
ಕೆಂಪೇಗೌಡರಸ್ತೆ, ಬೆಂಗಳೂರು -09,
ದಿನಾಂಕ:30 -12-2021.

**ಜ್ಞಾಪನ**

**ವಿಷಯ:** ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಪಿಕಾರ್ಡ್ ಬ್ಯಾಂಕುಗಳು ಮತ್ತು ಡಿಸಿಸಿ ಬ್ಯಾಂಕುಗಳ ಶಾಖೆಗಳಿಂದ Declaration/Form-3 ಯನ್ನು ಭೌತಿಕವಾಗಿ ಸಲ್ಲಿಸಲು ದಿನಾಂಕ:31-03-2022 ರವರೆಗೆ ಕಾಲಾವಕಾಶವನ್ನು ವಿಸ್ತರಿಸಿರುವ ಕುರಿತು.

**ಉಲ್ಲೇಖ:** 1. ಸರ್ಕಾರದ ಪತ್ರ ಸಂಖ್ಯೆ: ಕಂಇ/83/ಎಂಎನ್ಎಂಯು/2021, ದಿನಾಂಕ:15-11-2021.
2. ಸರ್ಕಾರದ ಪತ್ರ ಸಂಖ್ಯೆ: ಕಂಇ/123/ಎಂಎನ್ಎಂಯು/2021, ದಿನಾಂಕ:29-12-2021.

******

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಪಿಕಾರ್ಡ್ ಬ್ಯಾಂಕುಗಳು ಮತ್ತು ಡಿಸಿಸಿ ಬ್ಯಾಂಕುಗಳ ಶಾಖೆಗಳಿಂದ Declaration/Form-3 ಯನ್ನು ಭೌತಿಕವಾಗಿ ಸಲ್ಲಿಸಲು ಕೊನೆಯ ಅವಕಾಶವಾಗಿ ಕಾಲಮಿತಿಯನ್ನು ದಿನಾಂಕ:31-12-2021 ರವರೆಗೆ ಮಾತ್ರ ವಿಸ್ತರಿಸಲು ಅನುಮತಿ ನೀಡಲಾಗಿರುತ್ತದೆ.

ಮುಂದುವರೆದು, ಉಲ್ಲೇಖ(2)ರ ಸರ್ಕಾರದ ಪತ್ರದಲ್ಲಿ FRUITS ತಂತ್ರಾಂಶವನ್ನು ಉಪಯೋಗಿಸುವ ಬಗ್ಗೆ ಸಹಕಾರ ಇಲಾಖೆ ಹಾಗೂ ನೋಂದಣಿ ಕಛೇರಿಯ ಅಧಿಕಾರಿಗಳು ಪೂರ್ತಿ ಪ್ರಮಾಣದಲ್ಲಿ ತರಬೇತಿ ಹೊಂದಿಲ್ಲದ ಕಾರಣ, ಸಾಲ ಸೌಲಭ್ಯ ಪಡೆಯಲು ರೈತರಿಗೆ ತೊಂದರೆಯಾಗುತ್ತಿರುವುದರಿಂದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಪಿಕಾರ್ಡ್ ಬ್ಯಾಂಕುಗಳು ಮತ್ತು ಡಿಸಿಸಿ ಬ್ಯಾಂಕುಗಳ ಶಾಖೆಗಳಿಂದ Declaration/Form-3 ಯನ್ನು ಭೌತಿಕವಾಗಿ ಸಲ್ಲಿಸಲು ದಿನಾಂಕ:31-03-2022 ರವರಗೆ ಕಾಲಾವಕಾಶವನ್ನು ವಿಸ್ತರಿಸಲಾಗಿರುತ್ತದೆಂಬ ಮಾಹಿತಿಯನ್ನು ತಿಳಿಸುತ್ತಾ, ಅದರಂತೆ ಕ್ರಮವಹಿಸಲು ಈ ಮೂಲಕ ಸೂಚಿಸಿದೆ.

30.12.21

**ನೋಂದಣಿ ಮಹಾಪರಿವೀಕ್ಷಕರು ಮತ್ತು**
**ಮುದ್ರಾಂಕಗಳ ಆಯುಕ್ತರು, ಬೆಂಗಳೂರು.**

**ಇವರಿಗೆ:**
ರಾಜ್ಯದ ಎಲ್ಲಾ ಜಿಲ್ಲಾನೋಂದಣಾಧಿಕಾರಿಗಳು ಹಾಗೂ ಉಪನೋಂದಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಕಟ್ಟಡ, ಡಾ|| ಅಂಬೇಡ್ಕರ್ ವೀದಿ, ಬೆಂಗಳೂರು- 560 001 ರವರಿಗೆ ಮಾಹಿತಿಗಾಗಿ.

2. ಸಹಕಾರ ಇಲಾಖೆ, ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-560052 ರವರಿಗೆ ಮಾಹಿತಿಗಾಗಿ.

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ-ಆಡಳಿತ) ಕೊಠಡಿ ಸಂಖ್ಯೆ:106, 1ನೇ ಮಹಡಿ, 2ನೇ ಗೇಟ್, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001 ರವರಿಗೆ ಮಾಹಿತಿಗಾಗಿ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 123 [illegible]

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು ದಿನಾಂಕ: 29-12-2021

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ),
ಬಹುಮಹಡಿಗಳ ಕಟ್ಟಡ, ಬೆಂಗಳೂರು.

ಇವರಿಗೆ:

ನೋಂದಣಿ ಮಹಾಪರಿವೀಕ್ಷಕರು
ಹಾಗೂ ಮುದ್ರಾಂಕಗಳ ಆಯುಕ್ತರು,
ಕಂದಾಯ ಭವನ, 8ನೇ ಮಹಡಿ,
ಕೆ.ಜಿ.ರಸ್ತೆ, ಬೆಂಗಳೂರು.

ಮಾನ್ಯರೆ,

ವಿಷಯ: ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ನಬಾರ್ಡ್ ಬ್ಯಾಂಕುಗಳು ಮತ್ತು ಡಿಸಿಸಿ ಬ್ಯಾಂಕುಗಳ ಶಾಖೆಗಳಿಂದ Declaration/Form 3 ಭೌತಿಕವಾಗಿ ಸಲ್ಲಿಸಲು ದಿನಾಂಕ 31.03.2022ರ ವರೆಗೆ ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: 1) ತಮ್ಮ ಪತ್ರ ಸಂಖ್ಯೆ ಕಾಂಪ್/121/2020-21 ದಿನಾಂಕ 08.11.2021
2) ಸರ್ಕಾರದ ಪತ್ರ ಸಂಖ್ಯೆ: ಕಂಇ 83 ಮುಂಸ್ಟಾಂ 2021 ದಿ:15.11.2021

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ನಬಾರ್ಡ್ ಬ್ಯಾಂಕ್ ಗಳು ಮತ್ತು ಡಿಸಿಸಿ ಬ್ಯಾಂಕುಗಳ ಶಾಖೆಗಳಿಂದ Declaration/Form-3 ಭೌತಿಕವಾಗಿ ಸಲ್ಲಿಸಲು ದಿನಾಂಕ 31.12.2021ರ ವರೆಗೆ ಕಾಲಾವಕಾಶವನ್ನು ವಿಸ್ತರಿಸಲು ಉಲ್ಲೇಖ(2)ರ ದಿನಾಂಕ 15.11.2021ರ ಪತ್ರದಲ್ಲಿ ಅನುಮತಿಸಲಾಗಿತ್ತು.

FRUITS ತಂತ್ರಾಂಶವನ್ನು ಉಪಯೋಗಿಸುವ ಬಗ್ಗೆ ಸಹಕಾರ ಇಲಾಖೆಯ ಹಾಗೂ ನೋಂದಣಿ ಇಲಾಖೆಯ ಅಧಿಕಾರಿಗಳು ಪೂರ್ಣ ಪ್ರಮಾಣದಲ್ಲಿ ತರಬೇತಿ ಹೊಂದಿಲ್ಲದ ಕಾರಣ, ಸಾಲ ಸೌಲಭ್ಯ ಪಡೆಯಲು ರೈತರಿಗೆ ತೊಂದರೆಯಾಗುತ್ತಿರುವುದನ್ನು ಸರ್ಕಾರವು ಮನಗಂಡು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ನಬಾರ್ಡ್ ಬ್ಯಾಂಕುಗಳು ಮತ್ತು ಡಿಸಿಸಿ ಬ್ಯಾಂಕುಗಳ ಶಾಖೆಗಳಿಂದ Declaration/Form-3 ಭೌತಿಕವಾಗಿ ಸಲ್ಲಿಸಲು ದಿನಾಂಕ 31.03.2022ರವರೆಗೆ ಕಾಲಾವಕಾಶವನ್ನು ವಿಸ್ತರಿಸಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

29/12/21

(ಎ.ಜಿ.ಮೀನಾ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ
(ನೋಂದಣಿ ಮತ್ತು ಮುದ್ರಾಂಕ)

ಪ್ರತಿ:
ಸಹಕಾರ ಸಂಘಗಳ ನಿಬಂಧಕರು, ನಂ.1 ಅಲಿ ಅಸ್ಕರ್ ರಸ್ತೆ, ಬೆಂಗಳೂರು-52